# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 860 (885) |
| ಮಾನ್ಯ ಸದಸ್ಯರ ಹೆಸರು | ಶ್ರೀ ಶರವಣ. ಟಿ.ಎ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15.12.2025 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಮನಗರ ಅರ್ಚಕರ ಹಳ್ಳಿಯಲ್ಲಿ ರಾಜೀವ್ ಗಾಂಧಿ ವಿಶ್ವವಿದ್ಯಾಲಯಕ್ಕೆ ಕಟ್ಟಡ ಹಾಗೂ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಒಟ್ಟು ಎಷ್ಟು ಜಮೀನು ಮಂಜೂರಾಗಿದೆ; | ಸರ್ಕಾರದ ಆದೇಶ ಸಂಖ್ಯೆ: ಆಕುಕ/196/ಎಂಪಿಎಸ್/2006 (ಭಾ), ದಿನಾಂಕ: 18.08.2007ರಲ್ಲಿ ರಾಮನಗರ ತಾಲ್ಲೂಕಿನ ಅರ್ಚಕರಹಳ್ಳಿ ಗ್ರಾಮದಲ್ಲಿ ಯೋಜಿಸಲಾಗಿರುವ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಒಟ್ಟು 216 ಎಕರೆ 24 ಗುಂಟೆ ಜಮೀನಿನಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ 71 ಎಕರೆ 15 ಗುಂಟೆ ಜಮೀನನ್ನು ಹಾಗೂ 145 ಎಕರೆ 09 ಗುಂಟೆ ಜಮೀನನ್ನು ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ ಇವರಿಗೆ ಹಸ್ತಾಂತರಿಸಿದೆ. |
| ಆ) | ಸದರಿ ಜಮೀನಿನಲ್ಲಿ ಕಾಮಗಾರಿ ಪ್ರಾರಂಭಿಸಲು ವಿಶ್ವವಿದ್ಯಾಲಯವು ಬಿಡುಗಡೆ ಮಾಡಿದ ಒಟ್ಟು ಮೊತ್ತ ಎಷ್ಟು; ಸದರಿ ಮೊತ್ತವನ್ನು ಬಿಡುಗಡೆ ಮಾಡುವಾಗ ಅನುಸರಿಸಿದ ಕ್ರಮಗಳೇನು ಮತ್ತು ಯಾವ ಆಧಾರದ ಮೇಲೆ ಬಿಡುಗಡೆ ಮಾಡಲಾಗಿದೆ? | ಸರ್ಕಾರದ ಆದೇಶ ಸಂಖ್ಯೆ: ಆಕುಕ 15 ಆರ್‌ಜಿಯು 2019, ದಿನಾಂಕ: 01.02.2023 ರಲ್ಲಿ ರಾಮನಗರದ ಅರ್ಚಕರಹಳ್ಳಿಯಲ್ಲಿ ವಿಶ್ವವಿದ್ಯಾಲಯದ ಕ್ಯಾಂಪಸ್ ಹಾಗೂ ಇತರೆ ಪೂರಕ ಕಟ್ಟಡಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜಿನಿಯರಿಂಗ್ ಘಟಕದ ವತಿಯಿಂದ ನಿರ್ಮಿಸಲು ರೂ.600.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br><br>ದಿನಾಂಕ: 13.02.2023 ರಂದು ನಡೆದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಶೇಷ ಸಿಂಡಿಕೇಟ್ ಸಭೆಯ ನಿರ್ಣಯದಂತೆ ಸದರಿ ಕಾಮಗಾರಿಯ ಅಂದಾಜಿನ ಶೇಕಡ 50% ರಷ್ಟು ಮೊತ್ತವನ್ನು ಬಿಡುಗಡೆ ಮಾಡಲು ಅನುಮತಿ ನೀಡಿರುತ್ತದೆ. ಅದರಂತೆ ವಿಶ್ವವಿದ್ಯಾಲಯದ ಆದೇಶ ಸಂಖ್ಯೆ: ರಾಆವಿವಿ/ಅಭಿವೃದ್ಧಿ/ ರಾಮನಗರ/2015-16, ದಿನಾಂಕ: 14.02.2023 ರಂತೆ ಕಾಮಗಾರಿಯ ಅಂದಾಜು ಮೊತ್ತದ ಶೇಕಡ 50% ರಷ್ಟು ಮೊತ್ತವಾದ ರೂ.300.00 ಕೋಟಿಗಳನ್ನು ಕಾರ್ಯಪಾಲಕ ಇಂಜಿನಿಯರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ವಿಭಾಗ, ಬೆಂಗಳೂರು ರವರಿಗೆ ಠೇವಣಿಕರಿಸಲಾಗಿದೆ. |

| | | |
|---|---|---|
| ಇ) | ಸದರಿ ಜಮೀನಿನಲ್ಲಿ ವಿವಿ ಕಟ್ಟಡ ಹಾಗೂ ಕಾಲೇಜು ಕಟ್ಟಡ ಸಂಬಂಧಿಸಿದ ಟೆಂಡರ್ ಯಾರಿಗೆ ನೀಡಲಾಗಿದೆ: (ಸಂಪೂರ್ಣ ಮಾಹಿತಿ ನೀಡುವುದು) ಹಣ ಬಿಡುಗಡೆ ಮಾಡುವ ಮುನ್ನ ಟೆಂಡರ್ ಪೂರ್ವ ಪರಿಶೀಲನ ಸಮಿತಿಯ ಸಲಹೆಗಳನ್ನು ಪಡೆಯಲಾಗಿದೆಯೇ? (ಪಡೆದಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು): | ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 27 ಆರ್‌ಜಿಯು 2023, ದಿನಾಂಕ: 21.03.2023ರಲ್ಲಿ ರಾಮನಗರದ ಅರ್ಚಕರಹಳ್ಳಿಯಲ್ಲಿ ವಿಶ್ವವಿದ್ಯಾಲಯದ ಕ್ಯಾಂಪಸ್ ಹಾಗೂ ಇತರೆ ಪೂರಕ ಕಟ್ಟಡಗಳನ್ನು ನಿರ್ಮಾಣ ಮಾಡುವ ಕಾಮಗಾರಿಗೆ ಎಲ್-1 ಬಿಡ್‌ದಾರರಾದ ಮೆ\|\| ಸ್ಟಾರ್ ಇನ್‌ಫ್ರಾಟೆಕ್, ಬೆಂಗಳೂರು ರವರು ನಮೂದಿಸಿರುವ ರೂ. 470,52,08,254/-ಟೆಂಡರ್ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ಆದೇಶಿಸಿದೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜಿನಿಯರಿಂಗ್ ಘಟಕದ ವತಿಯಿಂದ ಕಾಮಗಾರಿಯನ್ನು ನಿರ್ವಹಿಸಲಾಗುತ್ತಿದ್ದು, ಸದರಿ ನಿರ್ಮಾಣ ಕಾಮಗಾರಿಗೆ ಹಣ ಬಿಡುಗಡೆ ಮಾಡುವ ಮುನ್ನ ಟೆಂಡರ್ ಪೂರ್ವ ಪರಿಶೀಲನಾ ಸಮಿತಿಯ ಸಲಹೆಗಳನ್ನು ಪಡೆಯುವ ಅವಶ್ಯಕತೆ ಇರುವುದಿಲ್ಲ. |

ಸಂಖ್ಯೆ: ಎಂಇಡಿ 600 ಎಂಎಂಸಿ 2025

(ಡಾ|| ಶರಣಪ್ರಕಾಶ ಆರ್. ಪಾಟೀಲ)
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು